ಬೆಂಗಳೂರು ನಗರ ವಿಶ್ವವಿದ್ಯಾಲಯ
BENGALURU CITY UNIVERSITY

ಸೆಂಟ್ರಲ್ ಕಾಲೇಜು ಆವರಣ, ಡಾ॥ ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು – 560 001.
Ph.No.080-22961016 / 22131385 E-Mail ID: registrarbcu@gmail.com

ದಿನಾಂಕ: 21-02-2022

ಸಂಖ್ಯೆ: ಬೆ.ನ.ವಿ./ಕು.ಸ./ಸಂಯೋಜನಾ/2021-22

## ಅಧಿಸೂಚನೆ

ವಿಷಯ: Sindhi Institute of Management, No.33/2 , Kempaprua Hebbal, Bangalore -24 ಕಾಲೇಜಗೆ 2021-22ನೇ ಶೈಕ್ಷಣಿಕ ಸಾಲಿಗೆ ಸಂಯೋಜನಾ ನವೀಕರಿಸುವ ಬಗೆಗೆ

ಉಲ್ಲೇಖ: 1 ವಿದ್ಯಾವಿಷಯಕ ಪರಿಷತ್ತಿನ ಅನುಮೋದನೆ ದಿನಾಂಕ: 20.12.2021
2. ಸಿಂಡಿಕೇಟ್ ಸಭೆಯ ಅನುಮೋದನೆ ದಿನಾಂಕ: 30.12.2021
3. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:16-02-2022

***

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59(12)ನೇ ಪ್ರಕರಣ 17ನೇ ಉಪಬಂಧದಲ್ಲಿ ಪ್ರದತ್ತವಾದ 7ನೇ ಪ್ರಕರಣದ ಅಧಿಕಾರದನ್ವಯ ಬೆಂಗಳೂರು ನಗರ ವಿಶ್ವವಿದ್ಯಾನಿಲಯವು, 2021-22ನೇ ಸಾಲಿಗೆ ಬೆಂಗಳೂರಿನ Sindhi Institute of Management, No.33/2 , Kempaprua Hebbal, Bangalore -24 , ಬೆಂಗಳೂರು, ನಡೆಸುತ್ತಿರುವ ಈ ಕೆಳಕಂಡ ಕೋರ್ಸಿಗೆ ಸರ್ಕಾರದ ನಿಬಂಧನೆ/ಷರತ್ತುಗಳೊಪಟ್ಟು ನವೀಕರಿಸಿ, ಮುಂದುವರೆಸಿದೆ.

| ಕೋರ್ಸ್ | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| MASTER OF BUSINESS ADMINISTRATION | GENERAL | 120 |

ವಿ.ಸೂ: 2020-21ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯನ್ನು ಲಗತ್ತಿಸಿದೆ. ವಿಶ್ವವಿದ್ಯಾನಿಲಯ ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ **Sindhi Institute of Management, No.33/2 , Kempaprua Hebbal, Bangalore -24** ಹೊಸ ಸಂಯೋಜನೆ ನೀಡಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು, ಇಲ್ಲವಾದ್ದಲ್ಲಿ 2022-23ನೇ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ

<u>ಷರತ್ತುಗಳು:</u>

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.
2. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾನಿಲಯ ಅಂಗೀಕಾರ ನೀಡುವುದಿಲ್ಲ.
3. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾನಿಲಯದ ಪೂರ್ವಾನುಮತಿಯಿಲ್ಲದೆ ವಿಭಾಗಗಳನ್ನು ಹೆಚ್ಚಿಸಬಾರದು.
4. ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
5. ವಿಶ್ವವಿದ್ಯಾನಿಲಯವು ಕಾಲೇಜಿನ ವಿದ್ಯಾರ್ಥಿಗಳು ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾನಿಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣ ಮೀರದಂತೆ ಹಾಗೂ ವಿಶ್ವವಿದ್ಯಾನಿಲಯವು ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.
6. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾನಿಲಯ ಕಾಲಕಾಲಕ್ಕೆ ನಿಗಧಿಪಡಿಸಿರುವ ಪ್ರವೇಶ ಮತ್ತು ಇತರೇ ಶುಲ್ಕಗಳನ್ನು ಮೀರದಂತೆ, ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50 ರಂತೆ (ಸರ್ಕಾರಿ ಕಾಲೇಜುಗಳಿಗೆ ಶೇಕಡಾ100 ರಂತೆ) ವಿಶ್ವವಿದ್ಯಾನಿಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಕೊಳ್ಳತಕ್ಕದ್ದು.

7. ವೈಶಾಕ v/s ರಾಜಸ್ಥಾನ ರಾಜ್ಯ ಸರ್ಕಾರದ ವ್ಯಾಜ್ಯಕ್ಕೆ ಸಂಬಂಧಿಸಿದಂತೆ, ದಿನಾಂಕ: 13.08.1997ರ ಸರ್ವೋಚ್ಚ ನ್ಯಾಯಾಲಯದ **ತೀರ್ಪಿನಂತೆ,** ಕಾಲೇಜು ಅಥವಾ ಕಛೇರಿ ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ (ಬೋಧಕ/ಬೋಧಕೇತರ/ಆಡಳಿತ ಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ.ಯಾವುದೇ ವ್ಯಕ್ತಿ / ವಿದ್ಯಾರ್ಥಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿ ದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.

8. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

9. ಕಾಲೇಜು, ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ. ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೆ ದಾಖಲೆಗಳನ್ನು ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾನಿಲಯಕ್ಕೆ ತಿಳಿಸತಕ್ಕದ್ದು.

10. ವಿದ್ಯಾರ್ಥಿಗಳು ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದ್ದಲ್ಲಿ, ಕಾಲೇಜು, ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರಿನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

11. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

12. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.

13. 2021-22ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೇ ಅರ್ಜಿಯನ್ನು ಸಲ್ಲಿಸತಕ್ಕದ್ದು.

14. ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್ (NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.

15. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ಹಾಗೂ ಕಡ್ಡಾಯವಾಗಿ ಮೌಲ್ಯಮಾಪನ ಕಾರ್ಯಕ್ಕೆ ಕಳುಹಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

16. ಪ್ರತಿ ಶೈಕ್ಷಣಿಕ ವರ್ಷದ ಎ.ಐ.ಸಿ.ಟಿ.ಇ. ವಿಸ್ತರಣಾ ಅನುಮೋದನೆಯನ್ನು ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು.

17. ಎ.ಐ.ಸಿ.ಟಿ.ಇ.ಯ ನವದೆಹಲಿ, ಕರ್ನಾಟಕ ಸರ್ಕಾರ ಹಾಗೂ ಬೆಂಗಳೂರು ನಗರ ವಿಶ್ವವಿದ್ಯಾನಿಲಯ ವಿಧಿಸಿರುವ/ವಿಧಿಸುವ ಷರತ್ತು ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

18. ಕೋರ್ಸಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಕರ್ನಾಟಕ ಎಂ.ಬಿ.ಎ. ಮತ್ತು ಎಂ.ಸಿ.ಎ. ಕೋರ್ಸುಗಳ ನಿಯಮಗಳನ್ವಯ ಮಾತ್ರ ಪಡೆಯತಕ್ಕದ್ದು.

ಆಜ್ಞೆ ಮೇರೆಗೆ

ಕುಲಸಚಿವರು

ಗೆ,

ಪ್ರಾಂಶುಪಾಲರು,

**Sindhi Institute of Management, No.33/2 , Kempaprua Hebbal, Bangalore -24,**

ಸಿ.ಎ. ನಂ.26, ಯಲಹಂಕ ನ್ಯೂ ಟೌನ್,

ಬೆಂಗಳೂರು - 560064

ಪ್ರತಿಗಳು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಡಾ. ಅಂಬೇಡ್ಕರ್ ವೀಧಿ, ಬೆಂಗಳೂರು -560001
2. ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು - 560001.
3. ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ನಗರ ವಿಶ್ವವಿದ್ಯಾನಿಲಯ, ಬೆಂಗಳೂರು 560001

ATTESTED

Director
Sindhi Institute of Management
No. 33/2B, Kempapura, Hebbal
Bengaluru - 560 024.